**<u>ಪ್ರಧಾನ ನಗರ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ (ಸಿಸಿಹೆಚ್-1) ರವರ ನ್ಯಾಯಾಂಗಣದಲ್ಲಿ</u>**

<u>ಎಸ್.ಸಿ. ಸಂಖ್ಯೆ: 497/2021</u>

ಚಾ.ಸಾ-1 ಪ್ರಾ.ಸಾ- 5

ದಿಃ 04.03.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

| | |
|---|---|
| ಹೆಸರು | ಲಕ್ಷ್ಮಮ್ಮ |
| ಗಂಡನ ಹೆಸರು | ನಾರಾಯಣಸ್ವಾಮಿ |
| ವಯಸ್ಸು | 50 ವರ್ಷ |
| ವೃತ್ತಿ | ಗೃಹಿಣಿ |
| ವಿಳಾಸ | ಹೆಬ್ಬಾಳ, ಬೆಂಗಳೂರು |

<u>ಮುಖ್ಯವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ</u>

ಚಾ.ಸಾ-30 - ಹರೀಶ್ ನನ್ನ ಮಗ. ಚಾ.ಸಾ-30 ರವರೊಂದಿಗೆ ಯಾರು ಗಲಾಟೆ ಮಾಡಿದ್ದರು ಮತ್ತು ಯಾರು ಆತನ ಮೇಲೆ ಹಲ್ಲೆ ಮಾಡಿದ್ದರು ಎಂದು ನನಗೆ ಗೊತ್ತಿಲ್ಲ.

2. ಈಗ ನನಗೆ ತೋರಿಸಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸಾಕ್ಷಿಗೆ ತೋರಿಸಿದ ದಾಖಲೆಯನ್ನು ನಿ.ಪಿ-8 ಎಂದು ಗುರುತಿಸಲಾಯಿತು. ಇದರಲ್ಲಿ ಸಾಕ್ಷಿಯು ಗುರುತಿಸಿರುವ ಅವರ ಸಹಿಯನ್ನು ನಿ.ಪಿ-8(ಎ) ಎಂದು ಗುರುತಿಸಲಾಯಿತು. ಈ ದಾಖಲೆಯಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಮಗನೊಂದಿಗೆ ಯಾರು ಗಲಾಟೆ ಮಾಡಿದ್ದರು ಮತ್ತು

ಯಾರು ಆತನ ಮೇಲೆ ಹಲ್ಲೆ ಮಾಡಿದ್ದರು ಎಂದು ನಾನು ಪೋಲೀಸರ ಮುಂದೆ ಹೇಳಿರಲಿಲ್ಲ. ನಾನು ಸಂಬಂಧಿತ ವ್ಯಕ್ತಿಗಳನ್ನು ಗುರುತಿಸಿರುವ ಬಗ್ಗೆಯೂ ಪೋಲೀಸರ ಮುಂದೆ ಹೇಳಿಕೆಯನ್ನು ನೀಡಿಲ್ಲ.

ಈ ಹಂತದಲ್ಲಿ ಮಾನ್ಯ ಮುಖ್ಯ ಸರ್ಕಾರಿ ಅಭಿಯೋಜಕರ ಕೋರಿಕೆಯ ಮೇರೆಗೆ ಸಾಕ್ಷಿಯ ಹೇಳಿಕೆ ಹಾಗು ಕಡತದಲ್ಲಿನ ದಾಖಲೆಗಳನ್ನು ಪರಿಗಣಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ.

ಪಾಟಿಸವಾಲುಃ ಮಾನ್ಯ ಮುಖ್ಯ ಸರ್ಕಾರಿ ಅಭಿಯೋಜಕರಿಂದಃ

3. ನಾನು ಚಾ.ಸಾ-30 ರವರ ಮೇಲೆ ಆದ ಹಲ್ಲೆ ಕುರಿತಂತೆ ಪೋಲೀಸರ ಮುಂದೆ ನಿ.ಪಿ-8 ರಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ದಿಃ 15.1.2021 ರಂದು ತನಿಖಾಧಿಕಾರಿಯವರ ಮುಂದೆ ಮುಂದುವರೆದ ಹೇಳಿಕೆಯನ್ನು ನೀಡಿ 1 ಮತ್ತು 2ನೇ ಆರೋಪಿಗಳು ನನ್ನ ಮಗನ ಮೇಲಿನ ಹಳೇ ದ್ವೇಷದಿಂದ ಆತನನ್ನು ಕೊಲೆ ಮಾಡುವ ಉದ್ದೇಶದಿಂದ ಇತರ ಆರೋಪಿಗಳೊಂದಿಗೆ ಸೇರಿಕೊಂಡು ಹಲ್ಲೆ ಮಾಡಿದ್ದರು ಎನ್ನುವ ವಿಚಾರ ನನಗೆ ತಿಳಿದು ಬಂದ ಕುರಿತಂತೆ ಹಾಗು ನಾನು ಸದರಿ ವ್ಯಕ್ತಿಗಳನ್ನು ನನ್ನ ಮನೆಯ ಹತ್ತಿರ ನೋಡಿರುವ ಕುರಿತಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ನನ್ನ ಹೇಳಿಕೆಯಲ್ಲಿ "ರಂಜಿತ್ ರಾವ್ ಮತ್ತು … … … ನೋಡಿರುತ್ತೇನೆ." ಎಂದು ಹೇಳಿರುತ್ತೇನೆ ಎಂದರೆ ಸರಿಯಲ್ಲ. ಈ ಭಾಗದ ಹೇಳಿಕೆಯನ್ನು ನಿ.ಪಿ-9 ಎಂದು ಗುರುತಿಸಲಾಯಿತು.

ಎಸ್.ಸಿ.ಸಂಖ್ಯೆ: 497/2021
ಫ್ರಾ.ಸಾ-5

4. ದಿಃ 20.1.2021ರಂದು ನಾನು ತನಿಖಾಧಿಕಾರಿಯವರ ಮುಂದೆ ಹೇಳಿಕೆಯನ್ನು ನೀಡಿ ಠಾಣೆಯಲ್ಲಿ ಪೋಲೀಸರ ವಶದಲ್ಲಿದ್ದ 1 ರಿಂದ 6 ನೇ ಆರೋಪಿಗಳನ್ನು ನೋಡಿ ಗುರುತಿಸಿ ಆ ಬಗ್ಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ನನ್ನ ಹೇಳಿಕೆಯಲ್ಲಿ "ಈ ದಿನ ... ... ... ಗುರುತಿಸುತ್ತೇನೆ." ಎಂದು ಹೇಳಿರುತ್ತೇನೆ ಎಂದರೆ ಸರಿಯಲ್ಲ. ಈ ಭಾಗದ ಹೇಳಿಕೆಯನ್ನು ನಿ.ಪಿ-10 ಎಂದು ಗುರುತಿಸಲಾಯಿತು.

5. ನನಗೆ ನಿ.ಪಿ-8 ರಿಂದ ನಿ.ಪಿ-10 ರಲ್ಲಿ ನಮೂದಿಸಿರುವ ವಿಚಾರಗಳು ತಿಳಿದಿದ್ದರೂ ಈಗ ನಾವು ಆರೋಪಿಗಳೊಂದಿಗೆ ರಾಜಿ ಮಾಡಿಕೊಂಡು ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿದಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿಗಳ ಪರ ವಕೀಲರು ತಮ್ಮ ಪರ ಪಾಟಿಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರುವಿಚಾರಣೆಃ ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಕೇ. ಹೇ. ಸರಿ ಇದೆ

(ಮುರಲಿಧರ ಪೈ ಬಿ.)
ಪ್ರಧಾನ ನಗರ ಮತ್ತು ಸತ್ರ ನ್ಯಾಯಾಧೀಶರು,
(ಸಿಸಿಹೆಚ್ - 01) ಬೆಂಗಳೂರು.